## ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ ಉತ್ತರ ಕನ್ನಡ : ಕಾರವಾರ

## ಸ್ಪೆಷಲ್ ಕೇಸ್ ನಂ. 3/2010

**ದೋ.ಸಾ. :87 ಪ್ರಾ.ಸಾ. : 36**

ಸಾಕ್ಷಿಯ ಹೆಸರು : ಗಣಪತಿ ಘಂಟಿ
ತಂದೆಯ ಹೆಸರು : ಕೇರಿಯಾ ಘಂಟಿ
ವಯಸ್ಸು : 55 ವರ್ಷ
ಉದ್ಯೋಗ : ರೈತಾಬಿ ವ ಕೂಲಿ ಕೆಲಸ
ವಾಸ : ಕಾನಗೋಡ ಗ್ರಾಮ, ಸಿದ್ದಾಪುರ ತಾಲೂಕು.

**ದಿನಾಂಕಃ 10-10-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಿಶೇಷ ಸರಕಾರಿ ಅಭಿಯೋಜಕರಿಂದ**

1. ನಾನು 40 ವರ್ಷಗಳಿಂದ ಕಾನಗೋಡ ಗ್ರಾಮದಲ್ಲಿ ವಾಸ ಇದ್ದೇನೆ. ನನಗೆ ಅಲ್ಲಿ ಸ್ವಂತ ಮನೆ ಇದೆ. ನ್ಯಾಯಾಲಯದ ಮುಂದಿರುವ ಆರೋಪಿ ನನಗೆ ಪರಿಚಯ ಇದ್ದಾರೆ. ಆರೋಪಿ ನಮ್ಮ ಗ್ರಾಮ ಪಂಚಾಯತಿ ಅಧ್ಯಕ್ಷ ಆಗಿದ್ದ. 2001-02 ರಲ್ಲಿ ನಮ್ಮ ಗ್ರಾಮ ಪಂಚಾಯತಿಗೆ ಸ್ವಚ್ಛ ಗ್ರಾಮ ಯೋಜನೆ ಅಡಿಯಲ್ಲಿ ರೂ. 20 ಲಕ್ಷ ನಮ್ಮ ಗ್ರಾಮಕ್ಕೆ ಮಂಜೂರು ಆದ ವಿಚಾರ ಮತ್ತು ಆ ಬಗ್ಗೆ ನಮ್ಮ ಗ್ರಾಮದಲ್ಲಿ 210 ಫಲಾನುಭವಿಗಳನ್ನು ಆಯ್ಕೆ ಮಾಡಿದ ವಿಚಾರ ನನಗೆ ಗೊತ್ತಿಲ್ಲ. ಆ ಫಲಾನುಭವಿ ಪಟ್ಟಿಯಲ್ಲಿ ನನ್ನ ಹೆಸರು ಇತ್ತು ಎಂಬುವುದು ನನಗೆ ಗೊತ್ತಿಲ್ಲ. ನನಗೆ ರೂ. 3000/- ಸಹಾಯ ದನ ಕೊಟ್ಟಿರುವುದಿಲ್ಲ. ನನ್ನ ಮನೆಗೆ ಯಾವುದೇ ಶೌಚಾಲಯವನ್ನು ಗ್ರಾಮ ಪಂಚಾಯತಿಯಿಂದ ನಿರ್ಮಾಣ ಮಾಡಿ ಕೊಟ್ಟಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಮಾನ್ಯ ಅಭಿಯೋಜಕರು ಅನುಮತಿಯನ್ನು ಕೇಳುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಗಮನಿಸಿ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ವಿಶೇಷ ಸರಕಾರಿ ಅಭಿಯೋಜಕರಿಂದ**

2. ನನಗೆ ಸದರಿ ಯೋಜನೆ ಬಗ್ಗೆ ಗೊತಿತ್ತು ಮತ್ತು ನಾನು ಫಲಾನುಭವಿ ಆಗಿದ್ದೆ ಎಂಬುವುದು ಗೊತ್ತಿತ್ತು ಎಂದರೆ ಸರಿಯಲ್ಲ. ಈಗ ಆರೋಪಿಗೆ ಸಹಾಯ ಮಾಡಲು ನಾನು

ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಲೋಕಾಯುಕ್ತ ಆರಕ್ಷಕ ನಿರೀಕ್ಷಕರಿಗೆ ಈ ಬಗ್ಗೆ ನಿಪಿ–70 ರಂತೆ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಜಿ ಟಿ ಎನ್ ರವರಿಂದ**

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ಹೇಳಿದ್ದಾರೆ.

**ಮರು ವಿಚಾರಣೆಃ – ಇಲ್ಲ –**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ)

ಓ.ಹೇ.ಕೇ.ಸ.ಇ.

(ಡಿ.ಎಸ್. ವಿಜಯಕುಮಾರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ , ಕಾರವಾರ